ಮಹದೇವಪುರ ವಲಯದಲ್ಲಿ ಪಾದಚಾರಿ ರಸ್ತೆ ಒತ್ತುವರಿ ತೆರವು ಕಾರ್ಯಾಚರಣೆ ಕುರಿತು:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವಾರ್ಡ್-54ರಲ್ಲಿ ಬರುವ ಹೂಡಿ ಉಪವಿಭಾಗದ ವೃತ್ತ ದಿಂದ ಶಾಂತಿನಿಕೇತನ ಐಟಿಪಿಎಲ್ ರಸ್ತೆಯವರೆಗಿನ ಪ್ರಮುಖ ರಸ್ತೆಗಳಲ್ಲಿ ಒಟ್ಟು ಸುಮಾರು 1.00ಕೀ.ಮೀ ಉದ್ದದ ರಸ್ತೆಯ ಎರಡು ಬದಿಗಳಲ್ಲಿ ಪಾದಚಾರಿ ರಸ್ತೆ ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುತ್ತಿದ್ದಂತಹ ಅಂಗಡಿಗಳ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಮಹದೇವಪುರ ವಲಯದ ವಾರ್ಡ್-54 ಅಭಿಯಂತರರ ನೇತೃತ್ವದಲ್ಲಿ ದಿನಾಂಕ:06-02-2021ರಂದು ಹಮ್ಮಿಕೊಳ್ಳಲಾಗಿದ್ದು, ಕಾರ್ಯಾಚರಣೆಯಲ್ಲಿ ಒಟ್ಟು 16 ತಾತ್ಕಾಲಿಕ ಪಾದಚಾರಿ ರಸ್ತೆ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆಯೆಂದು ಮಹದೇವಪುರ ವಲಯದ ಮುಖ್ಯ ಅಭಿಯಂತರರಾದ ಆರ್.ಎಲ್.ಪರಮೇಶ್ವರಯ್ಯ ರವರು ತಿಳಿಸಿದ್ದಾರೆ. ಹಾಗೂ ಪಾದಚಾರಿಗಳ ಸುರಕ್ಷತೆ ಹಿತದೃಷ್ಟಿಯಿಂದ ಒತ್ತುವರಿ ತೆರವಿನ Drive ಅನ್ನು ಇತರೆ ವಾರ್ಡ್ ಗಳಲ್ಲಿಯೂ ಸಹ ಮುಂದಿನ ದಿನಗಳಲ್ಲಿ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದ್ದಾರೆ.